ಸಮತಾ ನುಡಿ

196770

ಕನ್ನಡ ದಿನ ಪತ್ರಿಕೆ ಬಸವಕಲ್ಯಾಣ

ಸಾಮಾಜಿಕ ನ್ಯಾಯಕ್ಕಾಗಿ

ಸಂಪಾದಕರು : ಗುರುನಾಥ ಗಡ್ಡೆ
ಮೊ : 9739106045
email : bsuddibk@gmail.com

Samata Nudi Kannada Daily News Paper
PRGI No : KNKAN/25/A5209

ಗೌರವ ಸಂಪಾದಕರು : ಸಿದ್ಧಲಿಂಗ ಗಡ್ಡೆ
ಮೊ : 9036144531

ಸಂಪುಟ: 01 ಸಂಚಿಕೆ: 103 02.07.2026 ಗುರುವಾರ

Volume: 01 Issue: 103 pages 4 Rs.2/- bsuddibk@gmail.com

ಅಳುವುದೋ–ನಗುವುದೋ? 'ನಯಾರಾ'ದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಇಳಿಕೆ; ಸರ್ಕಾರಿ ಬಂಕ್‌ಗಳು ಯಥಾಸ್ಥಿತಿ

ದೇಶದ ಇಂಧನ ಮಾರುಕಟ್ಟೆಯಲ್ಲಿ ಮಹತ್ವದ ಬೆಳವಣಿಗೆ ನಡೆದಿದೆ. ರಷ್ಯಾ ಮೂಲದ ಖಾಸಗಿ ವಲಯದ ಅತಿ ದೊಡ್ಡ ತೈಲೋತ್ಪನ್ನ ಮಾರಾಟ ಕಂಪನಿ 'ನಯಾರಾ ಎನರ್ಜಿ' ತನ್ನ ಬಂಕ್‌ಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರಗಳನ್ನು ಗಣನೀಯವಾಗಿ ಕಡಿತಗೊಳಿಸಿದೆ. ಪೆಟ್ರೋಲ್ ಬೆಲೆಯನ್ನು ಪ್ರತಿ ಲೀಟರ್‌ಗೆ 5 ರೂ. ಮತ್ತು ಡೀಸೆಲ್ ಬೆಲೆಯನ್ನು ಪ್ರತಿ ಲೀಟರ್‌ಗೆ 3 ರೂ.ಗಳಷ್ಟು ಇಳಿಕೆ ಮಾಡಲಾಗಿದೆ. ಪರಿಷ್ಕೃತ ದರಗಳು ಇಂದಿನಿಂದಲೇ ಜಾರಿಗೆ ಬಂದಿವೆ ಎಂದು ಸಂಸ್ಥೆ ಖಚಿತಪಡಿಸಿದೆ.

ನಯಾರಾ ಪೆಟ್ರೋಲ್ ಬಂಕ್‌ಗಳಲ್ಲಿ ಪೆಟ್ರೋಲ್ ಬೆಲೆ 105.93 ರೂ. ಮತ್ತು ಡೀಸೆಲ್ ದರ ಪ್ರತಿ ಲೀಟರ್‌ಗೆ 95.80 ರೂ.ಗೆ ಇಳಿಕೆಯಾಗಿದೆ.

ಕಳೆದ ಕೆಲವು ತಿಂಗಳುಗಳಿಂದ ಜಾಗತಿಕ ಇಂಧನ ಮಾರುಕಟ್ಟೆಯನ್ನು ತಲ್ಲಣಗೊಳಿಸಿದ್ದ ಅಮೆರಿಕ–ಇರಾನ್ ಸಂಘರ್ಷ ಸದ್ಯ ತಿಳಿಯಾಗಿದೆ.

ಯುದ್ಧದ ಭೀತಿ ಕಡಿಮೆಯಾಗುತ್ತಿದ್ದಂತೆ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಸತತವಾಗಿ ಇಳಿಕೆಯಾಗುತ್ತಾ ಬಂದಿದೆ. ಜಾಗತಿಕ ಮಾರುಕಟ್ಟೆಯಲ್ಲಿ ತೈಲ ಬೆಲೆ ಇಳಿಕೆಯಾದ ಬೆನ್ನಲ್ಲೇ, ನಯಾರಾ ಎನರ್ಜಿ ತನ್ನ ಬಂಕ್‌ಗಳಲ್ಲಿ ಇಂಧನ ಬೆಲೆಯನ್ನು ಕಡಿತಗೊಳಿಸಿದೆ.

ಕುತೂಹಲಕಾರಿ ಅಂಶವೆಂದರೆ, ಇರಾನ್ ಸಂಘರ್ಷದ ಸಂದರ್ಭದಲ್ಲಿ ಇಂಧನ ದರವನ್ನು ಹೆಚ್ಚಿಸಿದ ಮೊದಲ ಕಂಪನಿಗಳಲ್ಲಿ ನಯಾರಾ ಕೂಡ ಒಂದಾಗಿತ್ತು. ಕಳೆದ ಮಾರ್ಚ್ 26 ರಂದು ಕಂಪನಿಯು ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಕ್ರಮವಾಗಿ 5 ರೂ. ಮತ್ತು 3 ರೂ.ಗಳಷ್ಟು ಹೆಚ್ಚಿಸಿತ್ತು. ಇದೀಗ ಪರಿಸ್ಥಿತಿ ಹತೋಟಿಗೆ ಬಂದಿರುವುದರಿಂದ ಅತ್ಯೇ ಪ್ರಮಾಣದ ದರವನ್ನು ಕಡಿತಗೊಳಿಸಿದೆ.

ನಯಾರಾ ಎನರ್ಜಿ ಕಂಪನಿಯು ದೇಶದಾದ್ಯಂತ 7,000ಕ್ಕೂ ಹೆಚ್ಚು ಇಂಧನ ಮಾರಾಟ ಕೇಂದ್ರಗಳನ್ನು (ಬಂಕ್) ಹೊಂದಿದೆ. ಕಂಪನಿಯು ಮೂಲ ಬೆಲೆಯಲ್ಲಿ ಕಡಿತ ಪ್ರಕಟಿಸಿದ್ದರೂ, ಅಯಾ ರಾಜ್ಯಗಳು ವಿಧಿಸುವ ಮೌಲ್ಯವರ್ಧಿತ ತೆರಿಗೆ (ಗಿಂಎಬಿ) ಮತ್ತು ಸ್ಥಳೀಯ ಸೆಸ್‌ಗಳಿಗೆ ಅನುಗುಣವಾಗಿ ವಿವಿಧ ನಗರಗಳಲ್ಲಿ ಗ್ರಾಹಕರಿಗೆ ಸಿಗುವ ಅಂತಿಮ ದರದಲ್ಲಿ ಕೊಂಚ ವ್ಯತ್ಯಾಸವಿರಲಿದೆ ಎಂದು ಹೇಳಲಾಗಿದೆ.

ತಟಸ್ಥವಾಗಿವೆ ಸರ್ಕಾರಿ ಸ್ವಾಮ್ಯದ ಬಂಕ್‌ಗಳು

ಖಾಸಗಿ ಕಂಪನಿಯು ದರ ಇಳಿಸಿ ಗ್ರಾಹಕರನ್ನು ಸೆಳೆಯುತ್ತಿದ್ದರೂ, ದೇಶದ ಸಾರ್ವಜನಿಕ ವಲಯದ (ಸರ್ಕಾರಿ ಸ್ವಾಮ್ಯದ) ಇಂಧನ ಮಾರಾಟ ಕಂಪನಿಗಳು ಮಾತ್ರ ದರ ಇಳಿಕೆಗೆ ಮುಂದಾಗಿಲ್ಲ.

ದೇಶದ ಒಟ್ಟು ಇಂಧನ ಮಾರುಕಟ್ಟೆಯಲ್ಲಿ 90%ಕ್ಕಿಂತ ಹೆಚ್ಚಿನ ಪಾಲನ್ನು ಹೊಂದಿರುವ ಪ್ರಮುಖ ಕಂಪನಿಗಳಾದ ಇಂಡಿಯನ್ ಆಯಿಲ್ ಕಾರ್ಪೋರೇಷನ್ (ಐಓಇ), ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಬಿಪಿಎಲ್) ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಎಚ್‌ಪಿಎಲ್) ತಮ್ಮ ತೈಲ ದರಗಳಲ್ಲಿ ಯಾವುದೇ ಬದಲಾವಣೆ ಮಾಡದೆ ಯಥಾಸ್ಥಿತಿ ಕಾಯ್ದುಕೊಂಡಿವೆ.

ಕಳೆದ ಮೇ ತಿಂಗಳ ದ್ವಿತೀಯಾರ್ಧದಲ್ಲಿ ಈ ಸರ್ಕಾರಿ ಕಂಪನಿಗಳು ಸರಣಿ ಪರಿಷ್ಕರಣೆಗಳ ಮೂಲಕ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಒಟ್ಟಾರೆಯಾಗಿ ಪ್ರತಿ ಲೀಟರ್‌ಗೆ 7.50 ರೂ.ರಷ್ಟು ಹೆಚ್ಚಿಸಿದ್ದವು. ಜಾಗತಿಕವಾಗಿ ಕಚ್ಚಾ ತೈಲದ ಬೆಲೆ ಇಳಿದಿದ್ದರೂ, ತಮಗಾಗಿರುವ ಹಿಂದಿನ ನಷ್ಟವನ್ನು ಸರಿದೂಗಿಸಿಕೊಳ್ಳಲು ಇವು ಸದ್ಯಕ್ಕೆ ಬೆಲೆ ಇಳಿಕೆಯ ನಿರ್ಧಾರದಿಂದ ದೂರ ಉಳಿದಿವೆ ಎನ್ನಲಾಗಿದೆ.

ಸದ್ಯದ ಮಾರುಕಟ್ಟೆ ದರದಂತೆ ಬೆಂಗಳೂರಿನಲ್ಲಿ ಸರ್ಕಾರಿ ಸ್ವಾಮ್ಯದ ಬಂಕ್‌ಗಳಲ್ಲಿ ಪೆಟ್ರೋಲ್ ಬೆಲೆ ಪ್ರತಿ ಲೀಟರ್‌ಗೆ 110.89 ರೂ. ಮತ್ತು ಡೀಸೆಲ್ ಬೆಲೆ ಪ್ರತಿ ಲೀಟರ್‌ಗೆ 98.80 ರೂ. ಇದೆ.

ಕೇಂದ್ರಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದ ಜನಸಂಖ್ಯಾ ಬದಲಾವಣೆಗಳ ಉನ್ನತ ಮಟ್ಟದ ಸಮಿತಿ ಸದಸ್ಯರು

ನವದೆಹಲಿ 01 ಜುಲೆ : ಅಕ್ರಮ ವಲಸೆ ಹಾಗೂ ಇತರ ಅಸಹಜ ಕಾರಣಗಳಿಂದ ಉಂಟಾಗುತ್ತಿರುವ ಜನಸಂಖ್ಯಾ ಬದಲಾವಣೆಗಳನ್ನು ಅಧ್ಯಯನ ಮಾಡಲು ಕೇಂದ್ರ ಸರ್ಕಾರ ರಚಿಸಿರುವ ಉನ್ನತ ಮಟ್ಟದ ಸಮಿತಿಯ ಸದಸ್ಯರು ಬುಧವಾರ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ಸಮಿತಿಯ ಕಾರ್ಯಯೋಜನೆ ಕುರಿತು ಚರ್ಚೆ ನಡೆಸಿದರು. ನಿವೃತ್ತ ನ್ಯಾಯಮೂರ್ತಿ ಪ್ರಕಾಶ್ ಪ್ರಭಾಕರ್ ನಾವ್ಲೇಕರ್ ಅವರ ನೇತೃತ್ವದ ಸಮಿತಿಯು ಶೀಘ್ರದಲ್ಲೇ ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಭೇಟಿ ನೀಡಿ ತಳಮಟ್ಟದ ಮಾಹಿತಿಯನ್ನು ನೇರವಾಗಿ ಸಂಗ್ರಹಿಸಲು ಮುಂದಾಗುವುದಾಗಿ ತಿಳಿಸಿತು.

ನವದೆಹಲಿಯಲ್ಲಿರುವ ಅಮಿತ್ ಶಾ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಸಮಿತಿಯ ಸದಸ್ಯರು ತಮ್ಮ ಕಾರ್ಯತಂತ್ರದ ಕುರಿತು ವಿವರವಾದ ಮಾಹಿತಿ ನೀಡಿದರು. ಜನಸಂಖ್ಯೆಯಲ್ಲಿನ ಅಸಹಜ ಬದಲಾವಣೆಗಳಿಗೆ ಕಾರಣವಾಗುತ್ತಿರುವ ಅಂಶಗಳನ್ನು ಸಮಗ್ರವಾಗಿ ಅಧ್ಯಯನ ಮಾಡಿ, ಅವುಗಳಿಗೆ ಪರಿಹಾರೋಪಾಯಗಳನ್ನು ಸೂಚಿಸುವ ಉದ್ದೇಶದಿಂದ ರಾಜ್ಯಗಳ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಸಾರ್ವಜನಿಕರು, ಆಡಳಿತಾಧಿಕಾರಿಗಳು ಹಾಗೂ ಸಂಬಂಧಿತ ಇಲಾಖೆಗಳೊಂದಿಗೆ ಸಮಾಲೋಚನೆ ನಡೆಸಲು ಯೋಜನೆ ರೂಪಿಸಿರುವುದಾಗಿ ಸಮಿತಿ ತಿಳಿಸಿತು.

ಸಮಿತಿಯ ಕಾರ್ಯತಂತ್ರವನ್ನು ಶ್ಲಾಘಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಸಮಿತಿಯ ಕಾರ್ಯನಿರ್ವಹಣೆಗೆ ಅಗತ್ಯವಿರುವ ಎಲ್ಲ ರೀತಿಯ ನೆರವು ಮತ್ತು ಸಹಕಾರವನ್ನು ಒದಗಿಸುವಂತೆ ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್ ಅವರಿಗೆ ನಿರ್ದೇಶನ ನೀಡಿದರು. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಯಾವುದೇ ಆಡಳಿತಾತ್ಮಕ ಅಡಚಣೆ ಉಂಟಾಗದಂತೆ ಕ್ರಮ ಕೈಗೊಳ್ಳುವಂತೆಯೂ ಸೂಚಿಸಿದರು.

ಜನಸಂಖ್ಯಾ ಬದಲಾವಣೆಗಳ ಕುರಿತ ಅಧ್ಯಯನವು ದೇಶದ ಸಾಮಾಜಿಕ, ಆರ್ಥಿಕ ಹಾಗೂ ರಾಷ್ಟ್ರೀಯ ಭದ್ರತೆಯ ದೃಷ್ಟಿಯಿಂದ ಮಹತ್ವದ್ದಾಗಿದ್ದು, ಸಮಗ್ರ ಮಾಹಿತಿಯ ಆಧಾರದ ಮೇಲೆ ಶಿಫಾರಸುಗಳನ್ನು ಸಿದ್ಧಪಡಿಸುವಂತೆ ಅಮಿತ್ ಶಾ ಸಲಹೆ ನೀಡಿದರು. ಸಮಿತಿಯು ತನ್ನ ಅಧ್ಯಯನವನ್ನು ಶೀಘ್ರ ಪೂರ್ಣಗೊಳಿಸಿ ವರದಿ ಹಾಗೂ ಶಿಫಾರಸುಗಳನ್ನು ಆದಷ್ಟು ಬೇಗ ಕೇಂದ್ರ ಸರ್ಕಾರಕ್ಕೆ ಸಲ್ಲಿಸಬೇಕು ಎಂದು ಅವರು ಸೂಚಿಸಿದರು.

ಕೇಂದ್ರ ಸರ್ಕಾರವು ಅಕ್ರಮ ವಲಸೆ ಮತ್ತು ಇತರ ಅಸಹಜ ಕಾರಣಗಳಿಂದ ಉಂಟಾಗುತ್ತಿರುವ ಜನಸಂಖ್ಯಾ ಬದಲಾವಣೆಗಳ ಪರಿಣಾಮವನ್ನು ಅಧ್ಯಯನ ಮಾಡಿ, ಅಗತ್ಯ ನೀತಿಪರ ಕ್ರಮಗಳನ್ನು ರೂಪಿಸುವ ಉದ್ದೇಶದಿಂದ ಈ ಉನ್ನತ ಮಟ್ಟದ ಸಮಿತಿಯನ್ನು ರಚಿಸಿದ್ದು, ದೇಶದ ವಿವಿಧ ಭಾಗಗಳಲ್ಲಿ ಸಮಗ್ರ ಅಧ್ಯಯನ ನಡೆಸಿದ ಬಳಿಕ ಅಂತಿಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುತ್ತದೆ.

ಭಾರಿ ಮಳೆ ಎಚ್ಚರಿಕೆ; ದಕ್ಷಿಣ ಕನ್ನಡದಲ್ಲಿ ಇಂದು ಶಾಲೆ–ಕಾಲೇಜುಗಳಿಗೆ ರಜೆ

ವಾಷಿಂಗ್ಟನ್ 01 ಜುಲೆ : ಕರಾವಳಿ ಭಾಗದಲ್ಲಿ ನಿರಂತರವಾಗಿ ಸುರಿಯುತ್ತಿರುವ ಭಾರಿ ಮಳೆಯಿಂದ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ದಕ್ಷಿಣ ಕನ್ನಡ ಜಿಲ್ಲೆಗೆ ಜುಲೈ 2ರಂದು ಕೆಂಪು ಎಚ್ಚರಿಕೆ ಘೋಷಿಸಿದೆ. ಮುನ್ನೆಚ್ಚರಿಕಾ ಕ್ರಮವಾಗಿ ವಿದ್ಯಾರ್ಥಿಗಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆಯ ಎಲ್ಲಾ ಶಾಲೆ–ಕಾಲೇಜುಗಳಿಗೆ ಜಿಲ್ಲಾಧಿಕಾರಿ ದರ್ಶನ್ ಅವರು ರಜೆ ಘೋಷಿಸಿ ಆದೇಶ ಹೊರಡಿಸಿದ್ದಾರೆ.

ಜಿಲ್ಲಾಧಿಕಾರಿಗಳ ಆದೇಶದಂತೆ ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳು, ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು, ಪದವಿಪೂರ್ವ ಕಾಲೇಜುಗಳು ಹಾಗೂ ಪದವಿ ಕಾಲೇಜುಗಳು ಸೇರಿದಂತೆ ಎಲ್ಲ ಶಿಕ್ಷಣ ಸಂಸ್ಥೆಗಳಿಗೆ ಜುಲೈ 2ರಂದು ರಜೆ ಇರಲಿದೆ.

ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಕರಾವಳಿ ಪ್ರದೇಶಗಳಲ್ಲಿ ಅತಿ ಭಾರಿ ಮಳೆಯಾಗುವ ಸಾಧ್ಯತೆ ಇದ್ದು, ಕೆಲವೆಡೆ ಬಿರುಗಾಳಿ ಹಾಗೂ ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದೆ. ಸಮುದ್ರ ತೀರ, ನದಿ ತೀರ ಹಾಗೂ ತಗ್ಗು ಪ್ರದೇಶಗಳಲ್ಲಿ ನೀರಿನ ಮಟ್ಟ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಸೂಚಿಸಿದೆ.

ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಈಗಾಗಲೇ ಎಚ್ಚರಿಕೆ ನೀಡಲಾಗಿದ್ದು, ತುರ್ತು ಪರಿಸ್ಥಿತಿ ಎದುರಾದರೆ ಜಿಲ್ಲಾಡಳಿತ ಹಾಗೂ ವಿಪತ್ತು ನಿರ್ವಹಣಾ ಇಲಾಖೆಯ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಮನವಿ ಮಾಡಲಾಗಿದೆ. ಜಿಲ್ಲಾಡಳಿತವು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದು, ಪರಿಸ್ಥಿತಿಯ ಮೇಲೆ ನಿರಂತರ ನಿಗಾ ಇಡಿಸಿದೆ.

ಪತ್ರಿಕೆ ದಿನದ ಅಂಗವಾಗಿ ಸಚಿವ ಖಂಡ್ರೆ ಶುಭಾಷಯಗಳು

ದಾವಣಗೆರೆ 01 ಜುಲೆ : ಹೊನ್ನಾಳಿಯಲ್ಲಿ ಪೂಜ್ಯ ಒಡೆಯರ್ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿಗಳ 91ನೇ ವರ್ಷದ ಜಯಂತ್ಯುತ್ಸವದಲ್ಲಿ ಭಾಗವಹಿಸಿದೆ. ಈ ಸಂದರ್ಭದಲ್ಲಿ ಕರ್ನಾಟಕದ ಮತದಾನಗಳು ಅನ್ನ, ಅಕ್ಷರ ಹಾಗೂ ಆಶ್ರಯ ದಾಸೋಹದ ಜೊಂಲಕ ಸಮಾಜದ ಅಭಿವೃದ್ಧಿಗೆ ನೀಡಿರುವ ಅಪಾರ ಕೊಡುಗೆಯನ್ನು ಸ್ಮರಿಸಿದೆ. ಯುವಜನತೆ ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ದುಶ್ಚಟಗಳಿಂದ ದೂರವಿರಬೇಕು ಎಂದು ಕರೆ ನೀಡಿದೆ.

ಪತ್ರಿಕಾ ದಿನದ ಅಂಗವಾಗಿ ಎಲ್ಲ ಮಾಧ್ಯಮ ಮಿತ್ರರಿಗೆ ಶುಭಾಶಯಗಳನ್ನು ಸಲ್ಲಿಸಿ, ಪ್ರಜಾಪ್ರಭುತ್ವದ ಯಶಸ್ಸಿನಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದೆ. ಜೊತೆಗೆ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೂರೈಕೆಗೆ ಯಾವುದೇ ಹಣಕಾಸಿನ ಕೊರತೆಯಿಲ್ಲ ಎಂದು ಸ್ಪಷ್ಟಪಡಿಸಿದೆ.

ಮತದಾರರ ವಿವಿಧೆಡೆ ವಿಶೇಷ ಸಮಗ್ರ ಪರಿಷ್ಕರಣೆ : ವಿವಿಧೆಡೆಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ

ಬೀದರ್ 01 ಜುಲೆ : ಜಿಲ್ಲಾದ್ಯಂತ ನಡೆಯುತ್ತಿರುವ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯದ ಅಂಗವಾಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ಶರ್ಮಾ ಅವರು ಬುಧವಾರ ಕಾಡಮಾದ ಮತ್ತು ಕವಠಾಣ ಗ್ರಾಮಗಳಿಗೆ ಭೇಟಿ ನೀಡಿ ಎನುಮರೇಷನ್ ಫಾರ್ಮ್ ವಿತರಣಾ ಕಾರ್ಯವನ್ನು ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಬಿಎಲ್‌ಒಗಳು ಜುಲೈ 29ರವರೆಗೆ ಮನೆ–ಮನೆಗೆ ಭೇಟಿ ನೀಡಿ ಎನುಮರೇಷನ್ ಸಮೂಹಗೆಗಳನ್ನು ವಿತರಿಸುತ್ತಿದ್ದಾರೆ. ಮತದಾರರು ಅಗತ್ಯ ಮಾಹಿತಿಯನ್ನು ಸರಿಯಾಗಿ ಭರ್ತಿ ಮಾಡಿ ಸಮೂಹಗೆಗಳನ್ನು ಬಿಎಲ್‌ಒಗಳಿಗೆ ಸಲ್ಲಿಸುವ ಮೂಲಕ ಈ ಪ್ರಕ್ರಿಯೆಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲೆಯಲ್ಲಿ ಒಟ್ಟು 1,528 ಮತಗಟ್ಟೆಗಳಿದ್ದು, 14,61,959 ಮತದಾರರಿದ್ದಾರೆ. ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ಅತ್ಯಂತ ಮಹತ್ವದ ಪ್ರಕ್ರಿಯೆಯಾಗಿದ್ದು, ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳು ಅಧಿಕಾರಿಗಳಿಗೆ ಅಗತ್ಯ ಸಹಕಾರ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾದ್ಯಂತ ಎಸ್‌ಐಆರ್ ಜಾಗೃತಿ ಅಭಿಯಾನ ತೀವ್ರಗೊಂಡಿದ್ದು, ತಹಶೀಲ್ದಾರರು, ಗ್ರಾಮ ಪಂಚಾಯಿತಿಗಳು ಹಾಗೂ ಕಾಲೇಜುಗಳು ವ್ಯಾಪಕ ಪ್ರಚಾರ ನಡೆಸುತ್ತಿವೆ. ಇದುವರೆಗೆ 70,359 ಎನುಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದ್ದು, 2,073 ಅರ್ಜಿಗಳ ಮಾಹಿತಿಯನ್ನು ಡೇಟಾ ಎಂಟ್ರಿ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಸ್ಟೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬಡೋಲೆ ಅವರು ನಗರದ ಗಣ್ಣರ ಮನೆಗಳಿಗೆ ಭೇಟಿ ನೀಡಿ ಎನುಮರೇಷನ್ ಫಾರ್ಮ್ ವಿತರಿಸಿ, ನಮೂನೆ ಭರ್ತಿ ವಿಧಾನ, ಅಗತ್ಯ ದಾಖಲೆಗಳು ಹಾಗೂ ನಿಗದಿತ ಅವಧಿಯೊಳಗೆ ಸಲ್ಲಿಸುವ ಕುರಿತು ಜಾಗೃತಿ ಮೂಡಿಸಿದರು.

ವಾಣಿಜ್ಯ ಎಲ್‌ಪಿಜಿ ದರದಲ್ಲಿ ₹183.50 ಭಾರಿ ಇಳಿಕೆ

- 19 ಕೆಜಿ ಸಿಲಿಂಡರ್ ಬೆಲೆ ಇಳಿಕೆ
- ಹೋಟೆಲ್, ಧಾಬಾ ಉದ್ಯಮಿಗಳಿಗೆ ನೆಮ್ಮದಿ
- ಪರಿಷ್ಕೃತ ದರ ಇಂದಿನಿಂದ ಜಾರಿ

ನವದೆಹಲಿ 01 ಜುಲೈ : ವಾಣಿಜ್ಯ ಉದ್ದೇಶಗಳಿಗೆ ಬಳಸುವ 19 ಕೆಜಿ ತೂಕದ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ತೈಲ ಮಾರುಕಟ್ಟೆ ಕಂಪನಿಗಳು ₹183.50ರಷ್ಟು ಭಾರಿ ಕಡಿತ ಘೋಷಿಸಿವೆ. ಪರಿಷ್ಕೃತ ದರಗಳು ಇಂದಿನಿಂದಲೇ ದೇಶದಾದ್ಯಂತ ಜಾರಿಗೆ ಬಂದಿದ್ದು, ಕಳೆದ ಹಲವು ತಿಂಗಳುಗಳಿಂದ ಸತತ ಬೆಲೆ ಏರಿಕೆಯಿಂದ ಸಂಕಷ್ಟದಲ್ಲಿದ್ದ ಹೋಟೆಲ್, ಧಾಬಾ, ಉಪಹಾರ ಗೃಹಗಳು, ಬೇಕರಿಗಳು, ಕ್ಯಾಟರಿಂಗ್ ಸಂಸ್ಥೆಗಳು ಹಾಗೂ ಅಹಾರೋದ್ಯಮದ ವ್ಯಾಪಾರಿಗಳಿಗೆ ಈ ನಿರ್ಧಾರ ಕೊಂಚ ನೆಮ್ಮದಿ ತಂದಿದೆ.

ಪಶ್ಚಿಮ ಏಷ್ಯಾದಲ್ಲಿನ ಯುದ್ಧದ ವಾತಾವರಣ ಹಾಗೂ ಜಾಗತಿಕ ಕಚ್ಚಾ ತೈಲ ಮತ್ತು ಅನಿಲದ ಬೆಲೆ ಏರಿಕೆಯಿಂದ ಕಳೆದ ನಾಲ್ಕು ತಿಂಗಳುಗಳಿಂದ ವಾಣಿಜ್ಯ ಎಲ್‌ಪಿಜಿ ದರ ನಿರಂತರವಾಗಿ ಹೆಚ್ಚಳವಾಗುತ್ತಿತ್ತು. ಇದರಿಂದ ಸಣ್ಣ ವ್ಯಾಪಾರಿಗಳು ಹಾಗೂ ಅಹಾರೋದ್ಯಮದ ಮೇಲೆ ಹೆಚ್ಚುವರಿ ವೆಚ್ಚದ ಹೊರೆ ಬಿದ್ದಿತ್ತು. ಜೂನ್ 25ರಂದು ಕೇಂದ್ರ ಸರ್ಕಾರ ವಾಣಿಜ್ಯ ಎಲ್‌ಪಿಜಿ ಪೂರೈಕೆಯ ಮೇಲಿದ್ದ ನಿರ್ಬಂಧಗಳನ್ನು ತೆರವುಗೊಳಿಸಿದ ಬಳಿಕ ಇದೀಗ ತೈಲ ಕಂಪನಿಗಳು ದರ ಇಳಿಕೆ ಮಾಡಿ ಗ್ರಾಹಕರಿಗೆ ನಿರಾಳತೆ ನೀಡಿವೆ.

ದೆಹಲಿಯಲ್ಲಿ ₹2,930ಕ್ಕೆ ಸಿಲಿಂಡರ್ ದರ ಪರಿಷ್ಕರಣೆಯ ಬಳಿಕ ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ₹3,113.50ರಿಂದ ₹2,930ಕ್ಕೆ ಇಳಿದಿದೆ. ಕೋಲ್ಕತ್ತಾದಲ್ಲಿ ಇದರ ಬೆಲೆ ₹3,052.50, ಮುಂಬೈನಲ್ಲಿ ₹3,081.50 ಹಾಗೂ ಚೆನ್ನೈನಲ್ಲಿ ₹3,227ಕ್ಕೆ ಇಳಿಕೆಯಾಗಿದೆ. ಅದರೆ 14.2 ಕೆಜಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ದರದಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ. ಗೃಹಬಳಕೆಯ ಗ್ರಾಹಕರು ಹಿಂದಿನಂತೆ ₹942 ಹಾವತಿಸಬೇಕಾಗಿದೆ.

ನಾಲ